ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

# ಸಹಕಾರ ವಾರ್ತಾಪತ್ರಿಕೆ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಪ್ರಕಟಣೆ

ಸಂಪುಟ : 2 । ಸಂಚಿಕೆ : 6 | ಜೂನ್ : 2020 | ಪುಟಗಳು : 20 । ಬೆಲೆ : 25/–

## ಮುಖ್ಯಮಂತ್ರಿ ಪರಿಹಾರ ನಿಧಿ (ಕೋವಿಡ್–19)ಗೆ ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ವತಿಯಿಂದ ದೇಣಿಗೆ ಸಲ್ಲಿಕೆ





## ಜೂನ್–5 ವಿಶ್ವ ಪರಿಸರ ದಿನಾಚರಣೆ "ಜೀವವೈವಿಧ್ಯ ದಿನ" ಜೀವ ಸಂಕುಲ ಉಳಿವಿಗೆ ಜನಜಾಗೃತಿ

# ಕೋರೊನಾ ಸಂಕಷ್ಟ : ಮುಖ್ಯಮಂತ್ರಿ ಪರಿಹಾರ (ಕೋವಿಡ್–19) ನಿಧಿಗೆ ದೇಣಿಗೆ ಸಲ್ಲಿಕೆ

**ಬೆಂಗಳೂರು :** ಕರ್ನಾಟಕ ರಾಜ್ಯದಲ್ಲಿ ಕೋವಿಡ್–19 ವೈರಸ್ ರಾಜ್ಯವ್ಯಾಪ್ತಿ ಹರಡಿ ಜನ ಸಾಮಾನ್ಯರ ಆರೋಗ್ಯದ ಮೇಲೆ ದುಷ್ಪರಿಣಾಮವನ್ನು ಬೀರುತ್ತಿದೆ. ಕರ್ನಾಟಕ ರಾಜ್ಯ ಸರ್ಕಾರವು ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಕೋವಿಡ್–19 ವೈರಸ್ ನಿರ್ಮೂಲನೆಗಾಗಿ ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಮಾನ್ಯ ಸಹಕಾರ ಸಚಿವರಾದ ಶ್ರೀ ಎಸ್.ಟಿ. ಸೋಮಶೇಖರ್‌ರವರು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಸಹಕಾರ ಕ್ಷೇತ್ರದಿಂದ ಹೆಚ್ಚಿನ ದೇಣಿಗೆ ಸಂದಾಯ ಮಾಡುತ್ತಿರುವುದು ಶ್ಲಾಘನೀಯ ವಿಚಾರ.



ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದಿಂದ ಮುಖ್ಯಮಂತ್ರಿ ಪರಿಹಾರ (ಕೋವಿಡ್–19) ನಿಧಿಗೆ ದೇಣಿಗೆಯ ಚೆಕ್ಕನ್ನು ಸಹಕಾರ ಸಚಿವರಿಗೆ ಹಸ್ತಾಂತರಿಸಲಾಯಿತು.

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು ಇದರ ವತಿಯಿಂದ ನೊವೆಲ್ ಕೋರೊನಾ–19ರ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 10 ಲಕ್ಷ ರೂ.ಗಳ ದೇಣಿಗೆಯ ಚೆಕ್ಕನ್ನು ಹಾಗೂ ಪತ್ತಿನ ಮಹಾಮಂಡಳದ ಅಧ್ಯಕ್ಷರು ಮಹಾಮಂಡಳದಿಂದ ಪಡೆದ ಗೌರವ ಧನ 50,000 ರೂ.ಗಳ ಚೆಕ್ಕನ್ನು ಮಾನ್ಯ ಸಹಕಾರ ಸಚಿವರಾದ ಶ್ರೀ ಎಸ್.ಟಿ. ಸೋಮಶೇಖರ್ ರವರಿಗೆ ಅಧ್ಯಕ್ಷರಾದ ಶ್ರೀಮತಿ ಕೆ.ಲಲಿತ ಜಿ.ಟಿ.ದೇವೇಗೌಡ ರವರು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಹಾಮಂಡಳದ ನಿರ್ದೇಶಕರುಗಳಾದ ಶ್ರೀ ಸಿ.ಎಂ.ಮಾರೇಗೌಡ, ಶ್ರೀ ಎಂ.ಜೆ.ನರೇಂದ್ರ ಕುಮಾರ, ಶ್ರೀ ಕೆ.ಕೃಷ್ಣಮೂರ್ತಿ, ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ, ಶ್ರೀ ಪಿ.ಕೆ. ಜಯಕೃಷ್ಣೇಗೌಡ, ಶ್ರೀ ಹೆಚ್.ಟಿ. ನಾಗೇಶ್ ಮತ್ತು ಶ್ರೀಮತಿ ಪಿ.ಆಶಾಲತಾ (ಪ್ರಭಾರ) ಮುಖ್ಯಕಾರ್ಯನಿರ್ವಹಣಾಧಿಕಾರಿರವರು ಉಪಸ್ಥಿತರಿದ್ದರು.

# ರೆಪೊ ದರ ಶೇಕಡಾ 4ಕ್ಕೆ, ರಿವರ್ಸ್ ರೆಪೊ ದರ ಶೇ.3.35ಕ್ಕೆ ಇಳಿಕೆ : ಆರ್‌ಬಿಐ




**ಮುಂಬೈ :** ಕೋವಿಡ್–19 ನಿಂದಾಗಿ ಲಾಕ್ ಡೌನ್ ಹಿನ್ನೆಲೆಯಲ್ಲಿ ಉಂಟಾಗಿರುವ ಹಣಕಾಸು ಬಿಕ್ಕಟ್ಟಿನ ಸಂದರ್ಭದಲ್ಲಿ ಹಲವು ಕ್ರಮಗಳನ್ನು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಗವರ್ನರ್ ಶಕ್ತಿಕಾಂತ್ ದಾಸ್ ಪತ್ರಿಕಾ ಗೋಷ್ಠಿಯಲ್ಲಿ ಪ್ರಕಟಿಸಿದ್ದಾರೆ.

ರೆಪೊ ದರ ಮತ್ತು ರಿವರ್ಸ್ ರೆಪೊ ದರ ಈ ಹೊತ್ತಿನಲ್ಲಿ ಮುಖ್ಯವಾಗಿದ್ದು ಈ ಕುರಿತು ಪ್ರಕಟಿಸಿದ ಶಕ್ತಿಕಾಂತ್ ದಾಸ್ ರೆಪೊ ದರವನ್ನು 40 ಬೇಸಿಸ್ ಪಾಯಿಂಟ್ ಗಳಂತೆ ಶೇಕಡಾ 4.4ರಿಂದ ಶೇಕಡಾ 4ಕ್ಕೆ ಇಳಿಸಿದ್ದಾರೆ. ರಿವರ್ಸ್ ರೆಪೊ ದರ ಶೇಕಡಾ 3.35ರಷ್ಟಾಗಿದೆ.

**ರೆಪೊ ದರ :** ಬ್ಯಾಂಕುಗಳಲ್ಲಿ ಹಣದ ಕೊರತೆಯಾದರೆ ಅಥವಾ ಹಣದ ಅವಶ್ಯಕತೆಯಿದ್ದರೆ ಆರ್‌ಬಿಐ ಬ್ಯಾಂಕುಗಳಿಗೆ ಕೊಡುವ ಸಾಲದ ಹಣದ ಮೇಲೆ ವಿಧಿಸುವ ನಿಶ್ಚಿತ ಬಡ್ಡಿ ದರವಾಗಿದೆ. ಹಣದುಬ್ಬರವನ್ನು ನಿಯಂತ್ರಿಸಲು ವಿತ್ತೀಯ ಅಧಿಕಾರಿಗಳು ರೆಪೊ ದರವನ್ನು ಬಳಸುತ್ತಾರೆ.

ಹಣದುಬ್ಬರದ ಸಂದರ್ಭದಲ್ಲಿ, ಕೇಂದ್ರ ಬ್ಯಾಂಕು ಆರ್‌ಬಿಐ ರೆಪೊ ದರವನ್ನು ಹೆಚ್ಚಿಸುತ್ತವೆ, ಸಾಧ್ಯವಾದಷ್ಟು ಬ್ಯಾಂಕುಗಳು ಕೇಂದ್ರ ಬ್ಯಾಂಕಿನಿಂದ ಸಾಲ ಪಡೆಯುವುದನ್ನು ತಡೆಯುತ್ತದೆ. ಇದು ಅಂತಿಮವಾಗಿ ಆರ್ಥಿಕತೆಯಲ್ಲಿ ಹಣ ಪೂರೈಕೆಯನ್ನು ಕಡಿಮೆ ಮಾಡಿ ಹಣದುಬ್ಬರ ನಿಯಂತ್ರಿಸಲು ಸಹಾಯ ಮಾಡುತ್ತದೆ.

**ರಿವರ್ಸ್ ರೆಪೊ ದರ :** ಇದಕ್ಕೆ ಪ್ರತಿಯಾಗಿ ಆರ್‌ಬಿಐ ಅಲ್ಪಾವಧಿಗೆ ಬ್ಯಾಂಕುಗಳಿಂದ ಹಣವನ್ನು ಸಾಲ ಪಡೆದು ಆ ಹಣದ ಮೇಲೆ ನೀಡುವ ಬಡ್ಡಿದರವನ್ನು ರಿವರ್ಸ್ ರೆಪೊ ದರ ಎಂದು ಕರೆಯುತ್ತಾರೆ.



## ಜಾಹಿರಾತು ಮನವಿ




ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಮಾಸಿಕ ಸಹಕಾರ ಪತ್ರಿಕೆಯನ್ನು ಪ್ರಕಟ ಮಾಡುತ್ತಿದ್ದು, ಪತ್ತಿನ ಸಹಕಾರ ಚಳವಳಿಯ ಪೂರಕ ಚಟುವಟಿಕೆಗಳಿಗೆ ಪ್ರಚಾರ ನೀಡುತ್ತಾ ಬರುತ್ತಿದೆ. ರಾಜ್ಯದ ಪತ್ತಿನ ಸಹಕಾರ ಸಂಘಗಳು ತಮ್ಮ ಕಾರ್ಯಪ್ರಗತಿಯ ವಿವರಗಳನ್ನು ಜಾಹಿರಾತು ಮೂಲಕ ಪ್ರಕಟಿಸಿದ್ದಲ್ಲಿ ಉತ್ತಮ ಪ್ರಚಾರ ಪಡೆದುಕೊಳ್ಳಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಪತ್ತಿನ ಸಹಕಾರ ಸಂಘಗಳ ಮಹಾಮಂಡಳವು ರಿಯಾಯಿತಿ ದರದಲ್ಲಿ ಜಾಹಿರಾತುಗಳನ್ನು ಪ್ರಕಟಿಸಲು ಉತ್ಸುಕವಾಗಿದೆ. ಸಹಕಾರ ಸಂಸ್ಥೆಗಳು ಸಂಪೂರ್ಣ ಮಾಹಿತಿಗಳೊಂದಿಗೆ ಜಾಹಿರಾತುಗಳನ್ನು ನೀಡಲು ಕೋರಿದೆ. ಜಾಹಿರಾತು ದರಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ದೂರವಾಣಿ ಹಾಗೂ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಲು ಕೋರಿದೆ.

ಮೊಬೈಲ್ ನಂ. 9986836884, ದೂರವಾಣಿ : 080 23564444, 23464033, 23464034

ಇ–ಮೇಲ್ : ksccsfltd@gmail.com, info@ksccsf.org, ವೆಬ್‌ಸೈಟ್ : www.ksccsf.org

## ಸಹಕಾರ ವಾರ್ತಾ ಪತ್ರಿಕೆಗೆ ಚಂದಾದಾರರಾಗಲು ಮನವಿ

ಕರ್ನಾಟಕ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪ್ರಕಟಿಸುತ್ತಿರುವ ಮಾಸಿಕ ಸಹಕಾರ ವಾರ್ತಾ ಪತ್ರಿಕೆಗೆ ಈಗಾಗಲೇ ಚಂದಾದಾರರಾಗಿರುವ ಸದಸ್ಯ ಸಹಕಾರ ಸಂಘಗಳನ್ನು ಹೊರತುಪಡಿಸಿ ಇನ್ನುಳಿದ ಪತ್ತಿನ ಸಹಕಾರ ಸಂಘಗಳು "ಸಹಕಾರ ಮಾಸಿಕ ವಾರ್ತಾ ಪತ್ರಿಕೆ"ಗೆ ಚಂದಾದಾರರಾಗಲು ಈ ಮೂಲಕ ಮನವಿ ಮಾಡಲಾಗಿದೆ.

**– ಸಂಪಾದಕರು**

SAHAKARA VARTHA PATHRIKE KANNADA MONTHLY
RNI-REG NO : KARKAN/2018/75796
POST REG NO : KA/BGW-1816/2019-2021
POSTING DATE : 1 & 5TH EVERY MONTH
POSTED AT : P/C RMS BHAVAN, BANGALORE PSO, Blore-26
PUBLISHED ON : 29TH of Previous Month

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಆಡಳಿತಮಂಡಳಿ


ಶ್ರೀಮತಿ ಕೆ. ಲಲಿತಾ ಜಿ.ಟಿ. ದೇವೇಗೌಡ
ಅಧ್ಯಕ್ಷರು


ಡಾ. ಬಿ.ಡಿ. ಭೂಕಾಂತ
ಉಪಾಧ್ಯಕ್ಷರು


ಶ್ರೀ ಸಿ.ಎಂ. ಮಾರೇಗೌಡ
ನಿರ್ದೇಶಕರು


ಶ್ರೀ ವಿ. ರಾಜು
ನಿರ್ದೇಶಕರು


ಡಾ. ಸಂಜಯ ಪಂ. ಹೊಸಮಠ
ನಿರ್ದೇಶಕರು


ಶ್ರೀ ಎಂ.ಜೆ. ನರೇಂದ್ರ ಕುಮಾರ
ನಿರ್ದೇಶಕರು


ಶ್ರೀ ಡಿ. ಚನ್ನಯ್ಯ
ನಿರ್ದೇಶಕರು


ಶ್ರೀ ಕೆ. ಕೃಷ್ಣಮೂರ್ತಿ
ನಿರ್ದೇಶಕರು


ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ
ನಿರ್ದೇಶಕರು


ಶ್ರೀ ಜಿ. ಮಲ್ಲಿಕಾರ್ಜುನಯ್ಯ
ನಿರ್ದೇಶಕರು


ಶ್ರೀ ತಮ್ಮಣ್ಣ ಬಿ. ಕೆಂಚರಡ್ಡಿ
ನಿರ್ದೇಶಕರು


ಶ್ರೀ ಧರೇಪ್ಪ ಎಂ. ಅಲಗೂರ
ನಿರ್ದೇಶಕರು


ಶ್ರೀ ಗುರುಪಾದಪ್ಪಗೌಡ ಬಿ. ಪಾಟೀಲ
ನಿರ್ದೇಶಕರು


ಶ್ರೀ ಹೊನ್ನಯ್ಯ ವಿ. ಹಿರೇಮಠ
ನಿರ್ದೇಶಕರು


ಶ್ರೀ ಪಿ.ಕೆ. ಜಯಕೃಷ್ಣೇಗೌಡ
ನಿರ್ದೇಶಕರು


ಶ್ರೀ ಶೇಖರಗೌಡ ಮಾಲಿ ಪಾಟೀಲ
ನಿರ್ದೇಶಕರು


ಶ್ರೀ ಹೆಚ್.ಟಿ. ನಾಗೇಶ್
ನಿರ್ದೇಶಕರು


ಶ್ರೀ ಡಿ.ಆರ್. ನಾಗೇಶಪ್ಪ
ನಿರ್ದೇಶಕರು


ಶ್ರೀ ಉಮೇಶ ಶಿ ಬಾಳಿ
ನಿರ್ದೇಶಕರು


ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ
ನಿರ್ದೇಶಕರು


ಶ್ರೀ ಚಿತ್ತರಂಜನ್ ಬೋಳಾರ್
ನಿರ್ದೇಶಕರು


ಶ್ರೀ ಕೆ.ಎಸ್.ಗುರುಪ್ರಸಾದ್
ಸಲಹೆಗಾರರು


ಶ್ರೀಮತಿ ಪಿ.ಆಶಾಲತಾ
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರ)

ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು
ನಂ.16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003

Printed at : Biligiri Printers
Chamrajpet, Bengaluru - 18.